ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ

ದಿನಾಂಕ : DATE : 26/05/2019

# ನೇಮಕಾತಿ ನಿಯಮ ತಿದ್ದುಪಡಿಗೆ ಆಕ್ಷೇಪ

ಪ್ರಜಾವಾಣಿ ವಾರ್ತೆ 26-5-19

**ಮುಖ್ಯಾಂಶಗಳು**

- **ಸಚಿವಾಲಯ ನೌಕರರ ಸಂಘದ ಆಗ್ರಹ**
- **ಕೆಲವು ತಿದ್ದುಪಡಿ ಕೈಬಿಡುವಂತೆ ಒತ್ತಾಯ**

**ಬೆಂಗಳೂರು:** ಸಚಿವಾಲಯದ ವೃಂದ ಮತ್ತು ನೇಮಕಾತಿ ಕರಡು ನಿಯಮಗಳಲ್ಲಿರುವ ಶೇ 20ರಷ್ಟು ಶಾಖಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವುದು ಸೇರಿದಂತೆ ಕೆಲವು ತಿದ್ದುಪಡಿಗಳನ್ನು ಕೈಬಿಡುವಂತೆ ಸಚಿವಾಲಯ ನೌಕರರ ಸಂಘ ಆಗ್ರಹಿಸಿದೆ.

'ಸಚಿವಾಲಯ ಸೇವೆಗಳು (ನೇಮಕಾತಿ) ನಿಯಮಗಳು– 1992'ರ ಸಮಗ್ರ ತಿದ್ದುಪಡಿಗೆ ಸಿದ್ಧಪಡಿಸಿದ್ದ ಕರಡು ಪ್ರಸ್ತಾವನ್ನು ಅನುಮೋದನೆಗಾಗಿ ಇದೇ 16ರಂದು ನಡೆದ ಸಚಿವ ಸಂಪುಟ ಸಭೆಗೆ ಮಂಡಿಸಲಾಗಿತ್ತು. ಈ ಪ್ರಸ್ತಾವದಲ್ಲಿರುವ ಅಂಶಗಳಿಗೆ ಸಂಘ ಆಕ್ಷೇಪ ವ್ಯಕ್ತಪಡಿಸಿದೆ.

ಶಾಖಾಧಿಕಾರಿಗಳ ನೇಮಕಾತಿ ವಿಷಯದಲ್ಲಿ ನೌಕರರ ಸಂಘ ಮತ್ತು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಒಪ್ಪಂದಕ್ಕೆ ಬರಲಾಗಿತ್ತು. ಶಾಖಾಧಿಕಾರಿಗಳ ಒಟ್ಟು ಹುದ್ದೆಗಳ ಸಂಖ್ಯೆಯಲ್ಲಿ ನಿರ್ದಿಷ್ಟ ಅನುಪಾತದಲ್ಲಿ ನೇರ ನೇಮಕಾತಿ ಅಗತ್ಯವೆಂದು ಸರ್ಕಾರ ಪಟ್ಟು ಹಿಡಿದಿತ್ತು. ಬಳಿಕ ನೌಕರರ ಬಡ್ತಿಗೆ ಮಾರಕವಾಗದಂತೆ ಒಟ್ಟು 50 ಹುದ್ದೆಗಳನ್ನು ಪ್ರತಿವರ್ಷದ ಬದಲು ಪ್ರತಿ ನೇಮಕಾತಿಗೆ ಐದು ಹುದ್ದೆಗಳಂತೆ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಮತ್ತು ಐದು ಹುದ್ದೆಗಳನ್ನು ಸಚಿವಾಲಯದಲ್ಲಿ ಕರ್ತವ್ಯದಲ್ಲಿರುವ ಅರ್ಹ ನೌಕರರಿಂದ ನೇರ ನೇಮಕಾತಿ ಮಾಡಿಕೊಳ್ಳಲು ಸಹಮತ ವ್ಯಕ್ತಪಡಿಸಲಾಗಿತ್ತು.

ಆದರೆ, ಕರಡು ಪ್ರಸ್ತಾವದಲ್ಲಿ ಶೇ 20ರಷ್ಟು ನೇರ ನೇಮಕಾತಿಗೆ ಪ್ರಸ್ತಾಪಿಸಿರುವುದು ನೌಕರರನ್ನು ಕೆರಳಿಸಿದೆ. ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರನ್ನು ಶನಿವಾರ ಭೇಟಿಯಾದ ಸಚಿವಾಲಯದ ನೌಕರರ ಸಂಘ ಹಾಗೂ ವಿವಿಧ ವೃಂದದ ಸಂಘಗಳ ಪ್ರತಿನಿಧಿಗಳು, ನೌಕರರಿಗೆ ಮಾರಕವಾಗುವ ಕೆಲವು ತಿದ್ದುಪಡಿಗಳನ್ನು ಕೈಬಿಡುವಂತೆ ಮನವಿ ಮಾಡಿದರು. ಈ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಮುಖ್ಯಮಂತ್ರಿ, ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.